# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/75 /2011-12

ದಿನಾಂಕ: 22-03-2012

## ಸಭಾಹ್ವಾನ ಪತ್ರ

ದಿನಾಂಕ: **29-03-2012**ರಂದು ಗುರುವಾರ ಅಪರಾಹ್ನ: **11-30** ಗಂಟೆಗೆ ಶ್ರೀ ಬಿ.ಆರ್. ಸತ್ಯನಾರಾಯಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ವಿಶೇಷ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

(ಎಸ್.ಟಿ.ಅಂಜನ್ ಕುಮಾರ್),
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ತುರ್ತು ಕುಡಿಯುವ ನೀರಿನ ಬಗ್ಗೆ.
2. ಬರಪರಿಹಾರ ಕಾಮಗಾರಿಗಳ ಬಗ್ಗೆ.
3. ಆಲೂಗೆಡ್ಡೆ ಬೆಳೆ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.

3. ಮಾನ್ಯ ಲೋಕಸಭಾ ಸದಸ್ಯರು,ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ
8. ಆಯುಕ್ತರು, ನಗರಸಭೆ, ಹಾಸನ ಇವರಿಗೆ
9. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
11. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ/ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ/ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಿ.ಎಂ.ಜಿ.ಎಸ್.ವೈ, ವಿಭಾಗ, ಹಾಸನ.
15. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
16. ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆ, ಹಾಸನ.
17. ಕಛೇರಿ ಪ್ರತಿ.

**ದಿನಾಂಕ: 29-03-2012ರಂದು ಪೂರ್ವಾಹ್ನ:11-30 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ವಿಶೇಷ ಸಭೆಯ ನಡವಳಿಗಳು**

**ಅಧ್ಯಕ್ಷತೆ: ಶ್ರೀ ಬಿ.ಆರ್.ಸತ್ಯನಾರಾಯಣ**

**ಅಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 46 | ಗೈರು ಹಾಜರಿ:12

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಮಾನ್ಯ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | | |
| 1 | ಕುಡಿಯುವ ನೀರಿನ ಕಾಮಗಾರಿಗಳ ಬಗ್ಗೆ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಾಸನ ಜಿಲ್ಲೆ ಐ.ಎಂ.ಐ.ಎಸ್ ಯೋಜನೆಯಡಿಯಲ್ಲಿ ರೂ.33.34 ಕೋಟಿಗಳ ಅನುದಾನವನ್ನು ನಿಗದಿಪಡಿಸಿದ್ದು, ಸರ್ಕಾರದಿಂದ ರೂ.20.64ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. ಬಿಡುಗಡೆಯಾಗಿರುವ ಅನುದಾನದಲ್ಲಿ ರೂ.16.00ಕೋಟಿಗಳ ಅನುದಾನವನ್ನು ವಿನಿಯೋಗಿಸಿ ಕುಡಿಯುವ ನೀರಿನ ವಿವಿಧ ಕಾಮಗಾರಿಗಳನ್ನು ಅನುಷ್ಠಾನ ಮಾಡಿದ್ದು, ಶೇ.83ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ. ಸರ್ಕಾರದಿಂದ ಬಿಡುಗಡೆ ಮಾಡಿರುವ ರೂ.20.00ಕೋಟಿಗಳ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ವಿನಿಯೋಗಿಸಿದಲ್ಲಿ ಸರ್ಕಾರದಿಂದ ಪುನಃ ಅನುದಾನ ಬಿಡುಗಡೆ ಮಾಡಲಾಗುವುದೆಂದು ತಿಳಿಸಿರುತ್ತಾರೆ.<br>ಪ್ರಸಕ್ತ ಸಾಲಿಗೆ ಐ.ಎಂ.ಐ.ಎಸ್ ಅಡಿಯಲ್ಲಿ ದಾಖಲಿಸಿರುವ ಕೆಲವು ಕಾಮಗಾರಿಗಳು ಪುನರಾವರ್ತನೆಯಾಗಿರುತ್ತವೆ. ಅಲ್ಲದೆ, ಹಳ್ಳಿಮೈಸೂರು ಮತ್ತು ಅರಸೀಕೆರೆ ತಾಲ್ಲೂಕಿನ ಕೆಲವು ಗ್ರಾಮಗಳಿಗೆ ಸಬ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಯೋಜನೆಗಳಿಗೆ ನಿಗದಿಪಡಿಸಿದ ಅನುದಾನವನ್ನು ವಿನಿಯೋಗಿಸಿರುವುದಿಲ್ಲ. ಆದ್ದರಿಂದ, 2012-13ನೇ ಸಾಲಿಗೆ ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಲಿಖಿತ ರೂಪದಲ್ಲಿ ಕುಡಿಯುವ ನೀರಿನ ಕಾಮಗಾರಿಗಳ ಪಟ್ಟಿಯನ್ನು ಪಡೆದು ಐ.ಎಂ.ಐ.ಎಸ್ ಅಡಿಯಲ್ಲಿ ದಾಖಲು ಮಾಡಲು ಕ್ರಮ ವಹಿಸಬೇಕೆಂದು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕುಡಿಯುವ ನೀರಿನ ಯೋಜನೆಗಳಡಿ ಕೊಳವೆ ಬಾವಿಗಳ ದುರಸ್ಥಿಗೆ ಸಂಬಂಧಿಸಿದಂತೆ, ಪ್ರತಿ ಗ್ರಾಮ ಪಂಚಾಯಿತಿಗೆ ರೂ.50000/-(ರೂಪಾಯಿ ಐವತ್ತು ಸಾವಿರ ಮಾತ್ರ) ಗಳಂತೆ ಅನುದಾನವನ್ನು ಬರಪರಿಹಾರ ಯೋಜನೆ ಯಡಿ ಬಿಡುಗಡೆ ಮಾಡುವಂತೆ ಕೋರಿ ಮಾನ್ಯ ಜಿಲ್ಲಾ ಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಕಾಮಗಾರಿಗಳ ಪಟ್ಟಿಯನ್ನು ಪಡೆದು 2012-13ನೇ ಸಾಲಿಗೆ ಐ.ಎಂ.ಐ.ಎಸ್ ಅಡಿಯಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ದಾಖಲಿಸಲು ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, 2011-12ನೇ ಸಾಲಿನಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಐ.ಎಂ.ಐ.ಎಸ್ ಯೋಜನೆಯಡಿ ರೂ.33.24**ಕೋಟಿ**ಗಳು ಮತ್ತು ಟಾಸ್ಕ್ ಫೋರ್ಸ್ ಅಡಿಯಲ್ಲಿ ರೂ.2.75 ಒಟ್ಟು ರೂ.36.00ಕೋಟಿಗಳ **ಅನುದಾನವನ್ನು** ನಿಗದಿಪಡಿಸಲಾಗಿದೆ. ಆದರೆ, ಪ್ರಗತಿಯನ್ನು ಸರ್ಕಾರದಿಂದ ಬಿಡುಗಡೆ ಮಾಡಿರುವ ರೂ.20.64ಕೋಟಿಗಳ ಅನುದಾನಕ್ಕೆ ನೀಡಿರುತ್ತೀರಿ. ಆದರೆ, ನಿಗದಿಪಡಿಸಿದ ಅನುದಾನಕ್ಕೆ ಪ್ರಗತಿ ಕಡಿಮೆಯಾಗಿರುತ್ತದೆ. ಆದ್ದರಿಂದ, ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ನುಗ್ಗೇಹಳ್ಳಿ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಕೊಳವೆ ಬಾವಿಯನ್ನು ಕೊರೆಯಬೇಕೆಂದು ಮನವಿ ಮಾಡಲಾಗಿತ್ತು. ಆದರೆ, ಇದುವರೆಗೆ ಕೊಳವೆ ಬಾವಿಯನ್ನು ಕೊರೆದಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br><br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉ: ಪಾಪಣ್ಣಿರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳ ಪ್ರಗತಿ ವರದಿ ಸಮರ್ಪಕವಾಗಿರುವುದಿಲ್ಲ. ಅಲ್ಲದೆ ಕುಡಿಯುವ ನೀರಿನ ಯೋಜನೆಗಳನ್ನೂ ಸಹ ಸಮರ್ಪಕವಾಗಿ ಅನುಷ್ಠಾನ ಮಾಡಿರುವುದಿಲ್ಲವೆಂದು ಅಸಮಾಧಾನವನ್ನು ವ್ಯಕ್ತಪಡಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯ ಟಿ.ಸಿ.ಯನ್ನು ಅಳವಡಸಿರುವುದಿಲ್ಲ. ಇದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಇರುವುದಿಲ್ಲ ಮತ್ತು ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡುತ್ತಿಲ್ಲ. ಇದರಿಂದ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಚೆಸ್ಕಾಂ ವತಿಯಿಂದ ತ್ವರಿತವಾಗಿ ಅವಶ್ಯ ಟಿ.ಸಿಯನ್ನು ಅಳವಡಿಸಲು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ, ಶ್ರೀ ಬಿ.ಡಿ.ಚಂದ್ರೇಗೌಡ, ಈಶ್ವರಹಳ್ಳಿ ಲಕ್ಷ್ಮಣ್ ಮತ್ತು ಶ್ರೀ ಎನ್.ಡಿ.ಕಿಶೋರ್ ರವರು ಕುಡಿಯುವ ನೀರಿನ ಯೋಜನೆಗಳ ವಿವರಗಳನ್ನು ಮಾತ್ರ ನೀಡಲಾಗುತ್ತಿದೆ. ಆದರೆ, ವಾಸ್ತವವಾಗಿ ಕುಡಿಯುವ ನೀರನ್ನು ಸಾರ್ವಜನಿಕರಿಗೆ ಒದಗಿಸಲು ಕ್ರಮ ವಹಿಸುತ್ತಿಲ್ಲ. ಈ ಬಗ್ಗೆ | ಚನ್ನರಾಯಪಟ್ಟಣ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಸನ ಮತ್ತು ಚನ್ನರಾಯಪಟ್ಟಣ ಮತ್ತು ಚೆಸ್ಕಾಂ ಇಲಾಖೆಯ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಸಾಮಾನ್ಯ ಸಭೆಯಲ್ಲಿ ವಿಷಯಗಳ ಬಗ್ಗೆ ಕೇವಲ ಚರ್ಚೆ ಮಾಡಲಾಗುತ್ತದೆ ಆದರೆ, ಯಾವುದೇ ಕ್ರಮ ವಹಿಸುವುದಿಲ್ಲವೆಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಾನ್ಯ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಚೆಸ್ಕಾಂ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಲಾಗಿದ್ದು, ಕುಡಿಯುವ ನೀರಿನ ಯೋಜನೆಗಳಿಗೆ ಆದ್ಯತೆ ಮೇಲೆ ವಿದ್ಯುದ್ದೀಕರಣ ಸೌಲಭ್ಯವನ್ನು ನೀಡಲು ಕ್ರಮ ವಹಿಸಬೇಕೆಂದು ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಅಧೀಕ್ಷಕ ಅಭಿಯಂತರರು, ಚೆಸ್ಕಾಂ, ಹಾಸನ ಇವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಠೇವಣಿಯನ್ನು ಕಟ್ಟಿದಲ್ಲಿ ಆದ್ಯತೆ ಮೇಲೆ ವಿದ್ಯುದ್ದೀಕರಣ ಸೌಲಭ್ಯವನ್ನು ನೀಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಮಾತನಾಡುತ್ತಾ, ಚೆಸ್ಕಾಂ ಇಲಾಖೆಯವರು ತಿಳಿಸಿರುವಂತೆ ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುದ್ದೀಕರಣ ಸೌಲಭ್ಯಕ್ಕೆ ವಾಸ್ತವವಾಗಿ ತಗಲುವ ವೆಚ್ಚವನ್ನು ಭರಿಸಲು ಒಪ್ಪಿಗೆಯನ್ನು ನೀಡಲಾಗಿದೆ. ಕುಡಿಯುವ ನೀರಿನ ಯೋಜನೆಗಳಡಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವತಿಯಿಂದ ಅನುಷ್ಠಾನ ಮಾಡಬೇಕಾಗಿರುವ ಎಲ್ಲಾ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದ್ದು, ಚೆಸ್ಕಾಂ ವತಿಯಿಂದ ವಿದ್ಯುದ್ದೀಕರಣ ಸೌಲಭ್ಯವನ್ನು ಒದಗಿಸಬೇಕಾಗಿರುತ್ತದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಮುರುದೂರು ಗ್ರಾಮದಲ್ಲಿ ಒಂದು ತಿಂಗಳಿನಿಂದ ಟಿ.ಸಿ ಕೆಟ್ಟು ಹೋಗಿದ್ದು, ಹೊಸದಾಗಿ ಟಿ.ಸಿಯನ್ನು ಅಳವಡಿಸಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು. | |

| | | | |
|---|---|---|---|
| | | ಅಧೀಕ್ಷಕ ಅಭಿಯಂತರರು ಚೆಸ್ಕಾಂ, ಹಾಸನ ಇವರು ಮಾತನಾಡುತ್ತಾ, ಮಾನ್ಯ ಸದಸ್ಯರು ಪ್ರಸ್ತಾಪಿಸಿರುವ ಗ್ರಾಮದಲ್ಲಿ ಅನಧಿಕೃತವಾಗಿ ಪಂಪ್ ಸೆಟ್ ಗಳನ್ನು ಹಾಕಿದ್ದು, ಅಲ್ಲಿ ಕೇವಲ 25 ಕೆ.ವಿ ಟಿ.ಸಿ ಮಾತ್ರ ಇರುತ್ತದೆ. ಇದರಿಂದ, ಲೋಡ್ ಹೆಚ್ಚಾಗಿ ಆಗಿಂದಾಗ್ಗೆ ಟಿ.ಸಿಯು ಕೆಟ್ಟು ಹೋಗುತ್ತಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.<br><br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವುದಿಲ್ಲ. ಆದರೆ, ಈ ಎರಡೂ ತಾಲ್ಲೂಕುಗಳಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುತ್ತದೆ. ಆದ್ದರಿಂದ, ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಚೆಸ್ಕಾಂ ಇಲಾಖೆಗೆ ಪಾವತಿಸಬೇಕಾಗಿರುವ ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ನೀಡಲು ಕ್ರಮ ವಹಿಸಲಾಗುವುದು. ಆದ್ದರಿಂದ, ವಿದ್ಯುದ್ದೀಕರಣ ಸೌಲಭ್ಯವನ್ನು ಕಲ್ಪಿಸಲು ಕ್ರಮ ವಹಿಸಬೇಕೆಂದು ಚೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ರಾಮಚಂದ್ರ (ಬೈರಮುಡಿ ಚಂದ್ರು)ರವರು ಮಾತನಾಡುತ್ತಾ, ಓವರ್ ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಕನಿಷ್ಟ ರೂ.15.00ಲಕ್ಷಗಳ ಅನುದಾನದ ಅವಶ್ಯಕತೆಯಿದೆ. ಆದರೆ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಸಿದ್ದಪಡಿಸಿರುವ ಅಂದಾಜು ಮೊತ್ತವು ತುಂಬಾ ಕಡಿಮೆಯಿರುತ್ತದೆ. ಆದ್ದರಿಂದ, ವಾಸ್ತವವಾಗಿ ತಗಲುವ ವೆಚ್ಚಕ್ಕನುಗುಣವಾಗಿ ಅಂದಾಜು ಪಟ್ಟಿಯನ್ನು ಸಿದ್ದಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಕೊಪ್ಪಳ ಜಿಲ್ಲೆಯಲ್ಲಿ ತಾತ್ಕಾಲಿಕವಾಗಿ ಕೆ.ಎಸ್.ಆರ್.ಟಿ.ಸಿ ವತಿಯಿಂದ 2 ಬಸ್ ಗಳನ್ನು ಬಾಡಿಗೆಗೆ ಪಡೆದು ಕೊಳವೆ ಬಾವಿಗಳನ್ನು ರಿಪೇರಿ ಮಾಡುವ ಮೆಕ್ಯಾನಿಕ್ ರವರಿಂದ ಎಲ್ಲಿ ಕುಡಿಯುವ ನೀರಿನ ಕೊಳವೆ ಬಾವಿಗಳು ರಿಪೇರಿಯಾಗಬೇಕಾಗಿದೆ ಅಲ್ಲಿಗೆ ತೆರಳಿ ಕೊಳವೆ ಬಾವಿಗಳನ್ನು ರಿಪೇರಿ ಮಾಡಿಸಲು ಕೊಪ್ಪಳ ಜಿಲ್ಲಾಧಿಕಾರಿಯವರು ಕ್ರಮ ವಹಿಸಿದ್ದು ಅದರಂತೆ ಹಾಸನ ಜಿಲ್ಲೆಯಲ್ಲಿಯೂ ಸಹ ಕ್ರಮ ವಹಿಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ. ಆದರೆ, ಈ ರೀತಿ | |

| | | | |
|---|---|---|---|
| | | ಮಾಡುವುದರಿಂದ, ಸಣ್ಣ ಪುಟ್ಟ ರಿಪೇರಿಗೆ ತಾಲ್ಲೂಕು ಕೇಂದ್ರ ಸ್ಥಾನದಿಂದ **ಬಹಳ ದೂರ** ಇರುವ ಗ್ರಾಮಗಳಿಗೆ ಬಸ್ಸನ್ನು ಉಪಯೋಗಿಸುವುದು ಬಹಳ ದುಬಾರಿಯಾಗುತ್ತದೆ . **ಈ ಎಲ್ಲಾ** ಸಾಧಕ ಬಾಧಕಗಳ ಬಗ್ಗೆ ಚರ್ಚೆ ಮಾಡಲಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಕೊಳವೆ **ಬಾವಿಗಳ** ದುರಸ್ಥಿಗೆ ಸಂಬಂಧಿಸಿದಂತೆ, ಅಗತ್ಯ ಅನುದಾನವನ್ನು ಬಿಡುಗಡೆ ಮಾಡಿದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೇ ದುರಸ್ಥಿಯನ್ನು ಮಾಡಿಕೊಳ್ಳುತ್ತಾರೆ. ಬರಪರಿಹಾರ ಯೋಜನೆಯಡಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಅಗತ್ಯ ಅನುದಾನ ನೀಡುವುದಾಗಿ ಮಾನ್ಯ ಜಿಲ್ಲಾಧಿಕಾರಿಯವರು **ತಿಳಿಸಿರುತ್ತಾರೆ.** ಆದ್ದರಿಂದ, ಕೊಳವೆ ಬಾವಿಗಳ ದುರಸ್ಥಿಗೆ ಪ್ರತಿ ಗ್ರಾಮ ಪಂಚಾಯಿತಿಗೆ ರೂ.50000/-ಗಳನ್ನು ಬಿಡುಗಡೆ ಮಾಡುವಂತೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಅದರಂತೆ, ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ **ಕೊಳವೆ** ಬಾವಿಗಳ ದುರಸ್ಥಿಗೆ ಪ್ರತಿ ಗ್ರಾಮ ಪಂಚಾಯಿತಿಗೆ ರೂ.50000/-ಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಮತ್ತು ಕೊಳವೆ ಬಾವಿಗಳ ದುರಸ್ಥಿಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಅವರ ಸಲಹೆ ಸೂಚನೆಗಳನ್ನು ಪಡೆದು ರಿಪೇರಿ ಮಾಡಿಸಲು ಕ್ರಮ ವಹಿಸಬೇಕೆಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ವಿದ್ಯುತ್ ಸಮಸ್ಯೆ ಬಹಳವಿರುವ ಗ್ರಾಮಗಳಲ್ಲಿ ಕುಡಿಯುವ ನೀರನ್ನು ಒದಗಿಸಲು ಅನುಕೂಲವಾಗುವಂತೆ ಪ್ರತಿ ತಾಲ್ಲೂಕಿನಲ್ಲಿಯೂ ಸಹ ಒಂದು ವ್ಯಾನಿಗೆ 7.5 ಕೆ.ವಿ ಜನರೇಟರನ್ನು ಅಳವಡಿಸಿ ಅತ್ಯಂತ ಸಮಸ್ಯೆಯಿರುವ ಗ್ರಾಮಗಳಲ್ಲಿ ಕುಡಿಯುವ ನೀರನ್ನು ಟ್ಯಾಂಕಿಗೆ ಭರ್ತಿ ಮಾಡಲು ಕ್ರಮ ವಹಿಸಬಹದಾಗಿರುತ್ತದೆ. ಇದರಿಂದ, ಸ್ವಲ್ಪಮಟ್ಟಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಬಹುದಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರುಗಳು ಮಾತನಾಡುತ್ತಾ, ಈ ರೀತಿ ಮಾಡಿದಲ್ಲಿ ಗೊಂದಲವುಂಟಾಗುತ್ತದೆ. ಎಲ್ಲಾ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿಯೂ ಸಹ ತೀವ್ರತರವಾದ ಕುಡಿಯುವ ನೀರಿನ ಸಮಸ್ಯೆಯಿರುತ್ತದೆ. | |

ಆದ್ದರಿಂದ, ಎಲ್ಲೆಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹಳವಿರುತ್ತದೆ. ಅಂತಹ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣ್ ರವರು ಮಾತನಾಡುತ್ತಾ, ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಲ್ಲಿ 12 ಕೆ.ವಿ ಜನರೇಟರನ್ನು ಗ್ರಾಮ ಪಂಚಾಯಿತಿ ವತಿಯಿಂದ ಖರೀದಿಸಿ ಕುಡಿಯುವ ನೀರನ್ನು ಒದಗಿಸಬಹುದಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜನರೇಟರ್ ಗಳನ್ನು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯೂ ಖರೀದಿಸಲು ಸಾಧ್ಯವಾಗುವುದಿಲ್ಲ. ಎಲ್ಲಾ ತಾಲ್ಲೂಕುಗಳಿಗೂ ಭೇಟಿ ನೀಡಿ ಅಧಿಕಾರಿಗಳ ಸಭೆಯನ್ನು ನಡೆಸಲಾಗಿದೆ. ಎಲ್ಲಿ ಕುಡಿಯುವ ನೀರಿನ ಯೋಜನೆಗಳಡಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದಲ್ಲಿ ಬೇರೆ ಕೊಳವೆ ಬಾವಿ ಕೊರೆಯುವ ಬದಲಿಗೆ ಅದೇ ಕೊಳವೆ ಬಾವಿಗೆ ಡೀಪನಿಂಗ್/ಫ್ಲೆಷಿಂಗ್ ಮಾಡಲು ಕ್ರಮ ವಹಿಸಬೇಕೆಂದು ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಮಂಜಮ್ಮ ಹೆಚ್.ಬಿ.ರವರು ಮಾತನಾಡುತ್ತಾ, ಸಕಲೇಶಪುರ ತಾ: ಅಗನಿ ಗುಡ್ಡದಿಂದ ಕುಡಿಯುವ ನೀರು ಸರಬರಾಜು ಯೋಜನೆಗೆ ಸಂಬಂಧಿಸಿದಂತೆ, ಕಾಮಗಾರಿಯು ಪುನರಾವರ್ತನೆಯಾಗಿದೆ ಎಂದು ಗುತ್ತಿಗೆದಾರರಿಗೆ ಹಣ ಪಾವತಿಸಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅಗನಿ ಗುಡ್ಡದಿಂದ ಕುಡಿಯುವ ನೀರು ಸರಬರಾಜು ಯೋಜನೆಗೆ ಸಂಬಂಧಿಸಿದಂತೆ, ವರದಿಯನ್ನು ಸಿದ್ದಪಡಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಸರ್ಕಾರದಿಂದ ಮಾಹಿತಿ ಬಂದ ನಂತರ ಅಗತ್ಯ ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಎಂ.ವಿ.ಹೇಮಾವತಿರವರು ಮಾತನಾಡುತ್ತಾ, ಕುಡಿಯುವ ನೀರಿನ ಮೂಲ ಇಲ್ಲದೇ ಇರುವ ಕಡೆಗಳಲ್ಲಿ ಕೊಳವೆ ಬಾವಿಯನ್ನು ಕೊರೆಸಲು ಕ್ರಮ ವಹಿಸಬೇಕೆಂದು ಕೋರಿದರು.

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸರ್ಕಾರಿಂದ **ಪ್ರತಿ ವಿಧಾನಸಭಾ** ಸದಸ್ಯರಿಗೆ ಟಾಸ್ಕ್ ಫೋರ್ಸ್ ಅಡಿಯಲ್ಲಿ ರೂ.30.00ಲಕ್ಷಗಳ ಅನುದಾವನ್ನು ಬಿಡುಗಡೆ **ಮಾಡಲಾಗಿದೆ** ಎಂದು ಮಾಹಿತಿ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಬಹುಗ್ರಾಮ ಯೋಜನೆಯಡಿಯಲ್ಲಿ ಅರಸೀಕೆರೆ ಮತ್ತು ಹೊಳೆನರಸೀಪುರ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಬೇರೆ ತಾಲ್ಲೂಕುಗಳಲ್ಲಿಯೂ ಸಹ ನದಿಮೂಲಗಳಿದ್ದು, ಬಹುಗ್ರಾಮ ಯೋಜನೆಯನ್ನು ಕೈಗೆತ್ತಿಕೊಳ್ಳುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಮಲೆನಾಡು ಪ್ರದೇಶಗಳಲ್ಲಿ ತೆರೆದ ಬಾವಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಎಲ್ಲೆಲ್ಲಿ ನದಿಮೂಲಗಳಿವೆ ಅಂತಹ ಕಡೆಗಳಲ್ಲಿ ಬಹುಗ್ರಾಮ ಯೋಜನೆಯನ್ನು ಅನುಷ್ಠಾನ ಮಾಡಲು ರೂ.5.00ಕೋಟಿಗಳ ಮಿತಿಯಲ್ಲಿ ಅಂದಾಜುಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ತಿಳಿಸಲಾಗಿದೆ ಎಂದು ವಿವರ ನೀಡಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಿಂದಿನ ವರ್ಷದಿಂದಲೂ ಸಹ ಬಹುಗ್ರಾಮ ಯೋಜನೆಯ ಬಗ್ಗೆ ಪ್ರಸ್ತಾಪ ಮಾಡಲಾಗಿದ್ದು, ಅಂದಾಜುಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಈಗಾಗಲೇ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ತಿಳಿಸಲಾಗಿದೆ ಎಂದು ವಿವರ ನೀಡಿದರು ಮತ್ತು ಬಹುಗ್ರಾಮ ಯೋಜನೆಯ ಬಗ್ಗೆ ಸರ್ವೆ ಮಾಡುವಾಗ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಐ.ಎಂ.ಐ.ಎಸ್ ನಲ್ಲಿ ದಾಖಲಿಸಲು ಕ್ರಮ ವಹಿಸಬೇಕೆಂದು ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಎನ್.ರಾಮಚಂದ್ರ (ಬೈರಮುಡಿ ಚಂದ್ರು)ರವರು ಮಾತನಾಡುತ್ತಾ, ಸಕಲೇಶಪುರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ ಇಂಜಿನಿಯರ್ ಕೊರತೆ ಬಹಳವಾಗಿದ್ದು, ಇಂಜಿನಿಯರ್ ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | |

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಏಪ್ರಿಲ್ ಮೊದಲ ವಾರದಲ್ಲಿ ಸಕಲೇಶಪುರ ತಾಲ್ಲೂಕಿಗೆ ಇಂಜಿನಿಯರ್ ರವರನ್ನು ನೇಮಕ ಮಾಡಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು. | |
| 2 | ಬರಪರಿಹಾರ ಕಾಮಗಾರಿಗಳ ಬಗ್ಗೆ | ಹಾಸನ ಜಿಲ್ಲೆಯಲ್ಲಿ 6 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಸರ್ಕಾರವು ಘೋಷಿಸಿದ್ದು, ಬರಪರಿಹಾರ ಕಾಮಗಾರಿಗಳಿಗೆ ವಿಶೇಷ ಅನುದಾವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಎಲ್ಲಾ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಒಕ್ಕೊರಲಿನಿಂದ ಸಹಮತವನ್ನು ವ್ಯಕ್ತಪಡಿಸಿದರು. | ಸಮಗ್ರ ಚರ್ಚೆಯ ನಂತರ, ಹಾಸನ ಜಿಲ್ಲೆಗೆ ಬರಪರಿಹಾರ ಯೋಜನೆಯಡಿ ವಿಶೇಷ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 3 | ಆಲೂಗೆಡ್ಡೆ ಬೆಳೆ ಬಗ್ಗೆ | ಮಾನ್ಯ ಮುಖ್ಯ ಕಾರ್ನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಆಲೂಗೆಡ್ಡೆ ಬಿತ್ತನೆ ಬಗ್ಗೆ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿಯನ್ನು ನೀಡಬೇಕೆಂದು ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆರವರಿಗೆ ತಿಳಿಸಿದರು.<br>ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆರವರು ಮಾತನಾಡುತ್ತಾ, ದಿನಾಂಕ: 16-11-2011ರಂದು ಮಾನ್ಯ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ 2012-13ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಆಲೂಗೆಡ್ಡೆ ಬಿತ್ತನೆ ಬೀಜದ ಬಗ್ಗೆ ಸಭೆಯನ್ನು ನಡೆಸಲಾಗಿದ್ದು, ರೈತರಿಗೆ ದೃಡೀಕೃತ ಬಿತ್ತನೆ ಬೀಜವನ್ನು ಮಾರಾಟ ಮಾಡಲು ಹಾಸನ ಜಿಲ್ಲೆಗೆ ಅವಶ್ಯವಿರುವ ಬಿತ್ತನೆ ಬೀಜವನ್ನು ಸರಬರಾಜು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ರಾಷ್ಟ್ರೀಯ ಬೀಜ ನಿಗಮದವರಿಗೆ ಬಿತ್ತನೆ ಬೀಜದ ಮೊತ್ತವನ್ನು ಪಾವತಿಸಬೇಕಾಗಿದ್ದು, ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿದ್ದು ಅನುಮೋದನೆ ನೀಡಿರುವುದಿಲ್ಲವೆಂದು ಸಭೆಗೆ ಮಾಹಿತಿ ನೀಡಿದರು.<br>ಮುಂದುವರೆದು, ಜಿಲ್ಲೆಗೆ ಬಂದಿರುವ ಆಲೂಗೆಡ್ಡೆ ಬಿತ್ತನೆ ಬೀಜವನ್ನು ಶೈತ್ಯಾಗಾರದಲ್ಲಿರಿಸಲಾಗಿದ್ದು, 45 ದಿನಗಳ ನಂತರ ಬಿತ್ತನೆಗೆ ಸೂಕ್ತವಾಗಿರುತ್ತದೆ. ಅಲ್ಲಿಯವರೆಗೆ ಆಲೂಗೆಡ್ಡೆ ಉತ್ತಮಗುಣಮಟ್ಟದಲ್ಲಿರುವ ಬಗ್ಗೆ ಪರಿಶೀಲನೆ ನಡೆಸಲು ಸಾಧ್ಯವಾಗುವುದಿಲ್ಲ. ಶೈತ್ಯಾಗಾರದಿಂದ ತಂದು ಮಾರಾಟ ಮಾಡುವ ಸಮಯದಲ್ಲಿ ಗುಣಮಟ್ಟದ ಬಗ್ಗೆ ಪರಿಶೀಲಿಸಲು ಕ್ರಮ ವಹಿಸಲಾಗುವುದೆಂದು ವಿವರ ನೀಡಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಆಲೂಗೆಡ್ಡೆ ಬಿತ್ತನೆ ಬೀಜವನ್ನು ನೀಡಿದ ತಕ್ಷಣವೇ ಅವಶ್ಯ ಸಸ್ಯ ಸಂರಕ್ಷಣಾ ಔಷಧಿಗಳನ್ನು ರಿಯಾಯಿತಿ ದರದಲ್ಲಿ ಸರಬರಾಜು ಮಾಡಲು ಕ್ರಮ ವಹಿಸುವಂತೆ ಉಪ ನಿರ್ದೇಶಕರು ತೋಟಗಾರಿಕಾ ಇಲಾಖೆರವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಸರ್ಕಾರದಿಂದ ಅರಿಶಿನಕ್ಕೆ ರೂ..4090/-ಗಳ ಬೆಂಬಲ ಬೆಲೆ ನೀಡಿರುವಂತೆ ಹಾಸನ ಜಿಲ್ಲೆಯಲ್ಲಿಯೂ ಸಹ ಅರಿಶಿನವನ್ನು ರೂ.4090/-ರ ದರದಲ್ಲಿ ಖರೀದಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲೆಯಲ್ಲಿ ಶುಂಠಿ ಮತ್ತು ಅರಿಶಿನವನ್ನು ಬೆಳೆದು ರೈತರಿಗೆ ಬಹಳ ನಷ್ಟವುಂಟಾಗಿರುತ್ತದೆ. ಇದರಿಂದ, ಈ ವರ್ಷ ರೈತರು ಆಲೂಗೆಡ್ಡೆಯನ್ನು ಬೆಳೆಯಲು ಆಸಕ್ತರಾಗಿರುತ್ತಾರೆ. ಆದ್ದರಿಂದ, ಜಿಲ್ಲೆಗೆ ಬಂದಿರುವ ಆಲೂಗೆಡ್ಡೆ ಬಿತ್ತನೆ ಬೀಜ ಉತ್ತಮ ಗುಣಮಟ್ಟದಲ್ಲಿವೆಯೇ ಎಂಬ ಬಗ್ಗೆ ಪರಿಶೀಲಿಸಿ ದೃಢೀಕರಿಸಿ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. ಮತ್ತು ಪೆಪ್ಸಿ ಆಲೂಗೆಡ್ಡೆ ಬಿತ್ತನೆ ಬೀಜವನ್ನು ನಿಷೇಧಿಸಲು ಅಗತ್ಯ ಕ್ರಮ ವಹಿಸಲಾಗಿದೆಯೇ ಎಂಬ ಬಗ್ಗೆ ವಿವರ ನೀಡಬೇಕೆಂದು ತಿಳಿಸಿದರು.<br>ಉಪ ನಿರ್ದೇಶಕರು ಮಾತನಾಡುತ್ತಾ, ಪ್ರಸಕ್ತ ಸಾಲಿನಲ್ಲಿ ಜಿಲ್ಲೆಗೆ ಬಿತ್ತನೆ ಬೀಜ ಈಗಾಗಲೇ ಬಂದಿದ್ದು, ಶೈತ್ಯಾಗಾರದಲ್ಲಿ ಇಡಲಾಗಿರುತ್ತದೆ. ಪೆಪ್ಸಿ ಆಲೂಗೆಡ್ಡೆ ಬಿತ್ತನೆ ಬೀಜವನ್ನು ನಿಷೇದಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಆದರೆ ಸರ್ಕಾರದಿಂದ ಪೆಪ್ಸಿ ಆಲೂಗೆಡ್ಡೆ ಬಿತ್ತನೆ ಬೀಜದ ನಿಷೇದಕ್ಕೆ ಒಪ್ಪಿಗೆಯನ್ನು ನೀಡಿರುವುದಿಲ್ಲ. ಆಲೂಗೆಡ್ಡೆ ಬಿತ್ತನೆಗೆ ಸಂಬಂಧಿಸಿದಂತೆ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಆಟೋರಿಕ್ಷಾ ಮೂಲಕ ಪ್ರಚಾರ ನೀಡಲಾಗಿದೆ, ರೇಡಿಯೋ ಮೂಲಕ ಪ್ರಚಾರ ನೀಡಲಾಗುತ್ತಿದೆ. ಬಿತ್ತಿ ಪತ್ರ, ಕರಪತ್ರಗಳನ್ನು ಜಿಲ್ಲೆಯ ಎಲ್ಲಾ ಭಾಗಗಳಿಗೂ ಸಹ ಹಂಚಿದ್ದು, ಎಲ್ಲಾ ಕ್ರಮಗಳ ಬಗ್ಗೆ ಬಿತ್ತಿ ಪತ್ರ ಮತ್ತು ಕರಪತ್ರಗಳಲ್ಲಿ ಮುದ್ರಿಸಲಾಗಿದೆ ಎಂದು ವಿವರ ನೀಡುತ್ತಾ, ಮಾನ್ಯ ಜಿಲ್ಲಾಧಿಕಾರಿಯವರು ಆದೇಶ ನೀಡಿದ ನಂತರ ಆಲೂಗೆಡ್ಡೆ ಬಿತ್ತನೆ ಬೀಜವನ್ನು ಮಾರಾಟ ಮಾಡಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಪೆಪ್ಸಿ ಆಲೂಗೆಡ್ಡೆ ಬಿತ್ತನೆ ಬೀಜವನ್ನು ತಡವಾಗಿ ರೈತರಿಗೆ ನೀಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆರವರಿಗೆ ತಿಳಿಸಿದರು. ಸಸ್ಯ ಸಂರಕ್ಷಣಾ ಔಷಧಿಗಳನ್ನು ರಿಯಾಯಿತಿ ದರದಲ್ಲಿ ಮುಂಚಿತವಾಗಿಯೇ ರೈತರಿಗೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಅರಿಶಿನಕ್ಕೆ ಕ್ವಿಂಟಾಲ್ ಗೆ ರೂ.4090ರಂತೆ ಬೆಂಬಲ ಬೆಲೆಯನ್ನು ನಿಗದಿಪಡಿಸಿದ್ದು, ಅದರಂತೆ, ಹಾಸನ ಜಿಲ್ಲೆಯಲ್ಲಿ ಬೆಳೆದಿರುವ ಅರಿಶಿನಕ್ಕೂ ಸಹ ಬೆಂಬಲ ಬೆಲೆಯನ್ನು ನಿಗದಿಪಡಿಸಿ ಖರೀದಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ರೈತರಿಗೆ ದೃಢೀಕೃತ ಆಲೂಗಡ್ಡೆ ಬಿತ್ತನೆ ಬೀಜವನ್ನು ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. ಮತ್ತು ಸಸ್ಯ ಸಂರಕ್ಷಣಾ ಔಷಧಿಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಸಮರ್ಪಕವಾಗಿ ವಿತರಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು. | |

| | ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು | | |
|---|---|---|---|
| 1 | ಜಿಲ್ಲಾ ಪಂಚಾಯಿತಿಗೆ ಹೊಸ ಲಿಫ್ಟ್ ಸಿಸ್ಟಂ ಅನ್ನು ಅಳವಡಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಯಲ್ಲಿ ಇರುವ ಲಿಫ್ಟ್ ಆಗಿಂದಾಗ್ಗೆ ಕೆಟ್ಟು ಹೋಗುತ್ತಿರುತ್ತವೆ ಮತ್ತು ಲಿಫ್ಟ್ ಯಂತ್ರವು ಹಳೆಯದಾಗಿರುತ್ತದೆ. ಅದ್ದರಿಂದ, ನವೀನ ಮಾದರಿಯ ಲಿಫ್ಟ್ ಯಂತ್ರವನ್ನು ಖರೀದಿಸಲು ಅನುಮೋದನೆ ನೀಡಬೇಕೆಂದು ಕೋರಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಹೊಸದಾಗಿ ಲಿಫ್ಟ್ ಯಂತ್ರವನ್ನು ಖರೀದಿಸಲು ಒಕ್ಕೊರಲಿನಿಂದ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯಿತಿಯಲ್ಲಿ ಹಾಲಿ ಇರುವ ಲಿಫ್ಟ್ ಹಳೆಯದಾಗಿದ್ದು, ಆಗಿಂದಾಗ್ಗೆ ರಿಪೇರಿಗೆ ಬರುತ್ತಿರುವುದರಿಂದ, ನವೀನ ಮಾದರಿಯ ಲಿಫ್ಟ್ ಯಂತ್ರವನ್ನು ಖರೀದಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 2 | ಹೊಸದಾಗಿ ಸಭಾಂಗಣವನ್ನು ನಿರ್ಮಾಣ ಮಾಡುವ ಬಗ್ಗೆ | ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಯಲ್ಲಿ ಆಗಿಂದಾಗ್ಗೆ ಸಭೆಗಳು ನಡೆಯುತ್ತಿದ್ದು, ಅತ್ಯಾದುನಿಕ ಸೌಲಭ್ಯಗಳನ್ನೊಳಗೊಂಡ ನವೀನ ಮಾದರಿಯ ಸಭಾಂಗಣವನ್ನು ಕಟ್ಟಡದ ಮೇಲ್ಬಾಗದಲ್ಲಿ ಖಾಲಿಯಿರುವ ಜಾಗದಲ್ಲಿ ನಿರ್ಮಾಣ ಮಾಡಲು ಅನುಮೋದನೆಯನ್ನು ನೀಡಬೇಕೆಂದು ಕೋರಿದರು ಮತ್ತು ಇದಕ್ಕೆ ತಗಲುವ ವೆಚ್ಚಕ್ಕೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರೂ.95.00ಲಕ್ಷಗಳ ಅನುದಾವನ್ನು ನಿಗದಿಪಡಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಅತ್ಯಾದುನಿಕ ಸೌಲಭ್ಯಗಳನ್ನೊಳಗೊಂಡ ನವೀನ ಮಾದರಿಯ ಸಭಾಂಗಣವನ್ನು ನಿರ್ಮಿಸಲು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯಿತಿ ಕಟ್ಟಡದ ಮೇಲ್ಭಾಗದಲ್ಲಿರುವ ಖಾಲಿ ಜಾಗದಲ್ಲಿ ಅತ್ಯಾದುನಿಕ ಸೌಲಭ್ಯಗಳನ್ನೊಳಗೊಂಡಂತೆ ಮತ್ತು ಪ್ರತ್ಯೇಕ ಊಟದ ಕೊಠಡಿಯನ್ನು ಹೊಂದಿರುವಂತೆ ನವೀನ ಮಾದರಿಯ ಸಭಾಂಗಣವನ್ನು ನಿರ್ಮಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು. |
| 3 | ಹೊಯ್ಸಳ ಸಭಾಂಗಣಕ್ಕೆ ಹೊಸದಾಗಿ ಮೈಕ್ ಸಿಸ್ಟಂ ಅಳವಡಿಸುವ ಬಗ್ಗೆ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹೊಯ್ಸಳ ಸಭಾಂಗಣಲ್ಲಿ ಆಗಿಂದಾಗ್ಗೆ ಸಭೆಗಳು ನಡೆಯುತ್ತಿರುತ್ತವೆ. ಆದರೆ, ಈಗ ಇರುವ ಮೈಕ್ ಸಿಸ್ಟಂ ತುಂಬಾ ಹಳೆಯದಾಗಿದ್ದು, ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲ. ಇದರಿಂದ, ಸಭೆಯಲ್ಲಿ ವಿಷಯಗಳ ಮೇಲಿನ ಚರ್ಚೆಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಈಗ ಇರುವ ಮೈಕ್ ಸಿಸ್ಟಂ ಅನ್ನು ಬದಲಾಯಿಸಿ ನವೀನ ಮಾದರಿಯ ಮೈಕ್ ಸಿಸ್ಟಂ ಅನ್ನು ಅಳವಡಿಸುವುದು ಸೂಕ್ತವಾಗಿದ್ದು, ಇದಕ್ಕೆ ಸಭೆಯು ಅನುಮೋದನೆಯನ್ನು ನೀಡಬೇಕೆಂದು ಕೋರಿದರು.<br>ಇದಕ್ಕೆ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಒಪ್ಪಿಗೆಯನ್ನು ಸೂಚಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹೊಯ್ಸಳ ಸಭಾಂಗಣದಲ್ಲಿ ಹಾಲಿ ಇರುವ ಮೈಕ್ ಸಿಸ್ಟಂ ಬದಲಿಗೆ ನವೀನ ಮಾದರಿಯ ಮೈಕ್ ಸಿಸ್ಟಂ ಅನ್ನು ಖರೀದಿಸಿ ಅಳವಡಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 4 | ತೋಟಗಾರಿಕೆ ಇಲಾಖೆಗೆ ಸೇರಿದ ಸಿಲ್ವರ್ ಜ್ಯುಬಿಲಿ ಪಾರ್ಕಿನಲ್ಲಿ ಬಾಲಭವನ, ಕರಕುಶಲ ವಸ್ತುಗಳ ಮಾರಾಟ ಕೇಂದ್ರ ಮತ್ತು ಮಿನಿ ಲಾಲ್ ಬಾಗ್ ನಿರ್ಮಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ತೋಟಗಾರಿಕೆ ಇಲಾಖೆಗೆ ಸೇರಿದ ಸಿಲ್ವರ್ ಜ್ಯುಬಿಲಿ ಪಾರ್ಕಿನಲ್ಲಿ ಸುಮಾರು 5 ಎಕರೆ ಜಮೀನು ಇದ್ದು, ಸದರಿ ಜಾಗದಲ್ಲಿ ಈಗಾಗಲೇ ಬಾಲಭವನವನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಹಾಸನ ನಗರದಲ್ಲಿ ಕರಕುಶಲ ವಸ್ತುಗಳನ್ನು ಮಾರಾಟ ಮಾಡಲು ಮಾರಾಟ ಕೇಂದ್ರವನ್ನು ನಿರ್ಮಿಸಲು ಅನುದಾನ ಲಭ್ಯವಿದ್ದು, ಕರಕುಶಲ ವಸ್ತುಗಳ ಮಾರಾಟ ಮಳಿಗೆಯ ಕಟ್ಟಡವನ್ನು ಸಿಲ್ವರ್ ಜ್ಯುಬಿಲಿ ಪಾರ್ಕಿನಲ್ಲಿ ನಿರ್ಮಿಸಿದಲ್ಲಿ ನಗರದ ಮದ್ಯಭಾಗದಲ್ಲಿರುವುದರಿಂದ, ಕರಕುಶಲ ವಸ್ತುಗಳ ಮಾರಾಟಕ್ಕೆ ಅನುಕೂಲವಾಗುತ್ತದೆ. ಅಲ್ಲದೆ ಸದರಿ ಪಾರ್ಕಿನಲ್ಲಿ ಬೆಂಗಳೂರಿನಲ್ಲಿರುವ ಲಾಲ್ ಬಾಗ್ ರೀತಿಯ ಉದ್ಯಾನವನ್ನು ನಿರ್ಮಿಸಿದಲ್ಲಿ ಹಾಸನ ನಗರದ ಸಾರ್ವಜನಿಕರಿಗೆ ಪ್ರಯೋಜನವಾಗುತ್ತದೆ. ಆದ್ದರಿಂದ, ಸಿಲ್ವರ್ ಜ್ಯುಬಿಲಿ ಪಾರ್ಕಿನಲ್ಲಿ ಕರಕುಶಲ ವಸ್ತುಗಳ ಮಾರಾಟ ಮಳಿಗೆ ನಿರ್ಮಾಣಕ್ಕೆ ಮತ್ತು ಮಿನಿ ಲಾಲ್ ಬಾಗ್ ಉದ್ಯಾನವನ ನಿರ್ಮಾಣಕ್ಕೆ ಸಭೆಯು ಅನುಮೋದನೆಯನ್ನು ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ತೋಟಗಾರಿಕೆ ಇಲಾಖೆಗೆ ಸೇರಿದ ಸಿಲ್ವರ್ ಜ್ಯುಬಿಲಿ ಪಾರ್ಕಿನಲ್ಲಿ ಕರಕುಶಲ ವಸ್ತುಗಳ ಮಾರಾಟಕ್ಕೆ ಅನುಕೂಲ ವಾಗುಂತೆ ಮಾರಾಟ ಮಳಿಗೆಯನ್ನು ನಿರ್ಮಿಸಲು ಮತ್ತು ಮಿನಿ ಲಾಲ್ ಬಾಗ್ ಉದ್ಯಾನವನ ವನ್ನು ನಿರ್ಮಿಸಲು ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| 5 | ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರನ್ನು ಆಯ್ಕೆ ಮಾಡುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಯ ಅಧ್ಯಕ್ಷರನ್ನು ಜಿಲ್ಲಾ ಪಂಚಾಯಿತಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದರಿಂದ, ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರ ಸ್ಥಾನ ಖಾಲಿ ಉಳಿದಿದ್ದು, ಅಧ್ಯಕ್ಷರನ್ನು ಆಯ್ಕೆ ಮಾಡಬೇಕಾಗಿದ್ದು, ಸಭೆಯ ನಿರ್ಣಯಕ್ಕೆ ವಿಷಯವನ್ನು ಮಂಡಿಸಿದರು.<br>ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಗೆ ಅಧ್ಯಕ್ಷರನ್ನು ಆಯ್ಕೆ ಮಾಡಲು ಅಧಿಕಾರವನ್ನು ಮಾನ್ಯ ಅಧ್ಯಕ್ಷರಿಗೆ ನೀಡಲು ಎಲ್ಲಾ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿಗೆ ಅಧ್ಯಕ್ಷರನ್ನು ಆಯ್ಕೆ ಮಾಡಲು ಅಧಿಕಾರವನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ನೀಡಲು ಸಬೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 6 | ಜಿಲ್ಲೆಯಲ್ಲಿ ಗ್ರಾಮೀಣ ರಸ್ತೆಗಳನ್ನು ಉನ್ನತೀಕರಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಗ್ರಾಮೀಣ ರಸ್ತೆಗಳು ತುಂಬಾ ಹದಗೆಟ್ಟಿದ್ದು, ರಸ್ತೆಗಳನ್ನು ಉನ್ನತೀಕರಿಸಿ ಸರ್ಕಾರದ ಅನುಮೋದನೆಗೆ ಮಂಡಿಸಲು ಅನೇಕ ಪ್ರಸ್ತಾವನೆಗಳು ಜಿಲ್ಲಾ ಪಂಚಾಯಿತಿಗೆ ಬಂದಿರುತ್ತವೆ. ಆದ್ದರಿಂದ, ಗ್ರಾಮೀಣ ರಸ್ತೆಗಳನ್ನು ಉನ್ನತೀಕರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಅನುಮೋದನೆಯನ್ನು ನೀಡಬೇಕೆಂದು ಸಭೆಯನ್ನು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಹಾಸನ ಜಿಲ್ಲಾ ಪಂಚಾಯಿತಿಗೆ ಗ್ರಾಮೀಣ ರಸ್ತೆಗಳನ್ನು ಉನ್ನತೀಕರಿಸಲು ಬಂದಿರುವ ಪ್ರಸ್ತಾವನೆ ಗಳನ್ನು ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 7 | ಚನ್ನರಾಯಪಟ್ಟಣ ನಗರ ಪ್ರದೇಶದಲ್ಲಿರುವ ವೈನ್ ಶಾಪ್ ನವರು ಗ್ರಾಮೀಣ ಪ್ರದೇಶಗಳಲ್ಲಿ ಮಧ್ಯಗಳನ್ನು ಮಾರಾಟ ಮಾಡುತ್ತಿರುವುದನ್ನು ತಡೆಯುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಚನ್ನರಾಯಪಟ್ಟಣ ನಗರ ಪ್ರದೇಶದಲ್ಲಿರುವ ವೈನ್ ಶಾಫ್ ನರವರು ಗ್ರಾಮೀಣ ಪ್ರದೇಶಗಳಲ್ಲಿನ ಮನೆಗಳಲ್ಲಿಯೇ ಮಧ್ಯಗಳನ್ನು ಮಾರಾಟ ಮಾಡುತ್ತಿದ್ದು, ಇದರಿಂದ, ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ಮಧ್ಯಗಳನ್ನು ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಕ್ರಮ ವಹಿಸುವಂತೆ ಅಬಕಾರಿ ಇಲಾಖೆಯ ಉಪ ನಿರ್ದೇಶಕರಿಗೆ ತಿಳಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಸದಸ್ಯರು ಕೋರಿದಂತೆ ಚನ್ನರಾಯಪಟ್ಟಣ ನಗರ ಪ್ರದೇಶದಲ್ಲಿರುವ ವೈನ್ ಶಾಫಿನರವರು ಗ್ರಾಮೀಣ ಪ್ರದೇಶಗಳಲ್ಲಿನ ಮನೆಗಳಲ್ಲಿ ಮಧ್ಯಗಳನ್ನು ಮಾರಾಟ ಮಾಡುತ್ತಿರುವುದನ್ನು ತಡೆಗಟ್ಟಲು ಅಗತ್ಯ ಕ್ರಮ ವಹಿಸುವಂತೆ ಅಬಕಾರಿ ಇಲಾಖೆಯ ಉಪ ನಿರ್ದೇಶಕರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 8 | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವಂತೆ ಕೋರಿ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದೆ. ಆದರೆ, ಕೂಲಿ ಹಣ ಮತ್ತು ಸಾಮಗ್ರಿ ಬಿಲ್ಲುಗಳನ್ನು ಪಾವತಿಸಲು ಗ್ರಾಮ ಪಂಚಾಯಿತಿಗಳಲ್ಲಿ ಹಣ ಇರುವುದಿಲ್ಲ. ಆದ್ದರಿಂದ, ಹಣವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ (ಅಭಿವೃದ್ಧಿ)ರವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಿದ್ದು, ಇಲ್ಲಿಯವರೆಗೆ ಬಿಡುಗಡೆ ಮಾಡಿದ್ದ ಅನುದಾನ ಸಂಪೂರ್ಣವಾಗಿ ವಿನಿಯೋಗ ಮಾಡಲಾಗಿದೆ. ಜಿಲ್ಲೆಗೆ ಇನ್ನೂ ಸುಮಾರು ರೂ.21.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಅನುದಾನ ಬಿಡುಗಡೆಯಾದ ನಂತರ ಗ್ರಾಮ ಪಂಚಾಯಿತಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br>ಮುಂದುವರೆದು, ಕೇಂದ್ರ ಸರ್ಕಾರದಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಶಾಲೆಗಳಿಗೆ ತಡೆಗೋಡೆ, ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣ ಮತ್ತು ಕಾಂಪೌಂಡ್ ಗಳನ್ನು ನಿರ್ಮಾಣ ಮಾಡಬಾರದೆಂದು ನಿರ್ದೇಶನ ಇರುತ್ತದೆ ಎಂದು ಮಾಹಿತಿ ನೀಡಿದರು.<br>ಮಾನ್ಯ ಸದಸ್ಯರುಗಳು ಶಾಲಾ ತಡೆಗೋಡೆ ಮತ್ತು ಅಂಗನವಾಡಿ ಕೇಂದ್ರಗಳ ಕಟ್ಟಡ ಮತ್ತು ತಡೆಗೋಡೆಗಳ ಕಾಮಗಾರಿಗಳು ಅತ್ಯವಶ್ಯಕವಾಗಿರುವುದರಿಂದ, ಇವುಗಳ ನಿರ್ಮಾಣಕ್ಕೆ ಅನುಮೋದನೆ ನೀಡುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2011-12ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನ ಮಾಡಿರುವ ಕಾಮಗಾರಿಗಳಿಗೆ ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಮತ್ತು ಶಾಲಾ ತಡೆಗೋಡೆ, ಅಂಗನವಾಡಿ ಕೇಂದ್ರಗಳ ಕಟ್ಟಡ ಹಾಗೂ ತಡೆಗೋಡೆಗಳ ನಿರ್ಮಾಣಕ್ಕೆ ಅನುಮೋದನೆ ನೀಡುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 9 | ಆಲೂರು ತಾ: ಮಗ್ಗೆ ಗ್ರಾಮದ ಶಾಲಾ ಆವರಣದಲ್ಲಿ ಅಂಚೆ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಅನುಮತಿ ನೀಡದಿರುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾ: ಮಗ್ಗೆ ಗ್ರಾಮದಲ್ಲಿರುವ ಶಾಲಾ ಆವರಣದಲ್ಲಿ ಅಂಚೆ ಕಛೇರಿಯನ್ನು ನಿರ್ಮಾಣ ಮಾಡಲು ಗ್ರಾಮ ಪಂಚಾಯಿತಿಯವರು ಅನುಮತಿ ನೀಡಿರುತ್ತಾರೆ. ಇದರಿಂದ, ಮಕ್ಕಳಿಗೆ ತುಂಬಾ ತೊಂದರೆಯಾಗುತ್ತದೆ. ಆದ್ದರಿಂದ, ಶಾಲಾ ಆವರಣದಲ್ಲಿ ಅಂಚೆ ಕಛೇರಿಯನ್ನು ನಿರ್ಮಿಸಲು ಅನುಮತಿಯನ್ನು ನೀಡಬಾರದೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ಮಾನ್ಯ ಸದಸ್ಯರು ಕೋರಿರುವಂತೆ ಆಲೂರು ತಾ: ಮಗ್ಗೆ ಗ್ರಾಮದಲ್ಲಿರುವ ಶಾಲಾ ಆವರಣದಲ್ಲಿ ಅಂಚೆ ಕಛೇರಿ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸ್ಥಳ ತನಿಖೆ ಮಾಡಿ ವರದಿಯನ್ನು ನೀಡುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| 10 | ಆಲೂರು ತಾ: ರಾಯರ ಕೊಪ್ಪಲು ಗ್ರಾಮದಲ್ಲಿರುವ ವಿದ್ಯಾರ್ಥಿ ನಿಲಯದ ಕೊಠಡಿಗಳನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಳಸಿಕೊಳ್ಳಲು ಅನುಮತಿ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾ: ರಾಯರಕೊಪ್ಪಲು ಗ್ರಾಮದಲ್ಲಿರುವ ವಿದ್ಯಾರ್ಥಿನಿಲಯದಲ್ಲಿ ಮಕ್ಕಳು ಇಲ್ಲದೇ ಇರುವುದರಿಂದ, ಸದರಿ ವಿದ್ಯಾರ್ಥಿನಿಲಯದ ಕೊಠಡಿಗಳನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಳಸಿಕೊಳ್ಳಲು ಅನುಮತಿ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ಮಾನ್ಯ ಸದಸ್ಯರು ಕೋರಿರುವಂತೆ ಆಲೂರು ತಾ: ರಾಯರಕೊಪ್ಪಲು ಗ್ರಾಮದಲ್ಲಿರುವ ವಿದ್ಯಾರ್ಥಿನಿಲಯದ ಕೊಠಡಿಗಳನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಳಸಿಕೊಳ್ಳಲು ಅನುಮತಿ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸ ಲಾಯಿತು. |
| | ಸಭೆಯಲ್ಲಿ ಇನ್ನಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

(ಬಿ.ಆರ್.ಸತ್ಯನಾರಾಯಣ),
ಅಧ್ಯಕ್ಷರು,
ಜಿಲ್ಲಾ ಪಂಚಾಯಿತಿ, ಹಾಸನ.